ಓ.ಎಸ್. ನಂ. 55/2018

ಪಿ.ಡಬ್ಲ್ಯು 01

ದಿನಾಂಕಃ 04-02-2021 ರಂದು ಮುಖ್ಯ ವಿಚಾರಣೆಗೆ ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷ್ಯರೂಪದಲ್ಲಿ ಹಾಜರು ಪಡಿಸಿರುವ ನನ್ನ ಪ್ರಮಾಣ ಪತ್ರದಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ತಿಳಿದುಕೊಂಡು ನಾನು ನನ್ನ ಸಹಿ ಮಾಡಿದ್ದೇನೆ.

<u>ಮಾನ್ಯ ನ್ಯಾಯಾಲಯಕ್ಕೆ ಹಾಜರು ಪಡಿಸಿದ ದಾಖಲಾತಿಗಳ ವಿವರ ಈ ಕೆಳಗಿನಂತಿದೆ.</u>

1. ದಿನಾಂಕಃ 02-02-2015 ರ ನೋಂದಾಯಿತ ಕ್ರಯದ ಕರಾರು ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 01 ಎಂದು ಗುರುತಿಸಲಾಯಿತು.
2. ದಿನಾಂಕಃ 20-12-2017 ರ ಲೀಗಲ್ ನೋಟೀಸ್‌ನ ಕಛೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 02 ಎಂದು ಗುರುತಿಸಲಾಯಿತು.
3. ಸರ್ವೆ ನಂ. 123 ರ 2017-18 ನೇ ಸಾಲಿನ ಗಣಕೀಕೃತ ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 03 ಎಂದು ಗುರುತಿಸಲಾಯಿತು.
4. ಮ್ಯುಟೇಶನ್ ಆದೇಶ ಸಂಖ್ಯೆ ಹೆಚ್ 55/2016-17 ರ ಆದೇಶವನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 04 ಎಂದು ಗುರುತಿಸಲಾಯಿತು.
5. ದಿನಾಂಕಃ 25-01-2017 ರ ಕ್ರಯ ಪತ್ರದ ದೃಢೀಕೃತ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 05 ಎಂದು ಗುರುತಿಸಲಾಯಿತು.
6. ಅಂಚೆ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 06 ಎಂದು ಗುರುತಿಸಲಾಯಿತು.
7. ಅಂಚೆ ಸ್ವೀಕೃತಿ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿಃ 07 ಎಂದು ಗುರುತಿಸಲಾಯಿತು.

ವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಸಾಕ್ಷಿಯ ಮುಂದಿನ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,

ಕೂಡ್ಲಿಗಿ.